# Official Spokesperson's response to media queries on the Indian Consulate in Kandahar

July 11, 2021

## ಕಂದಹಾರ್‌ನಲ್ಲಿರುವ ಭಾರತೀಯ ರಾಯಭಾರಿ ಕಛೇರಿ ಕುರಿತು ಮಾಧ್ಯಮ ಪ್ರಶ್ನೆಗಳಿಗೆ ಅಧಿಕೃತ ವಕ್ತಾರ ಪ್ರತಿಕ್ರಿಯೆ

ಜುಲೈ 11, 2021

**ಕಂದಹಾರ್‌ನಲ್ಲಿರುವ ಭಾರತೀಯ ರಾಯಭಾರಿ ಕಛೇರಿ ಕುರಿತು ಮಾಧ್ಯಮ ಪ್ರಶ್ನೆಗಳಿಗೆ ಉತ್ತರಿಸಿದ ಅಧಿಕೃತ ವಕ್ತಾರರಾದ ಶ್ರೀ ಅರಿಂದಮ್ ಬಾಗ್ಚಿ ಅವರು ಹೀಗೆ ಹೇಳಿದರು:**

"ಅಫ್ಘಾನಿಸ್ತಾನದಲ್ಲಿ ವಿಕಸಿಸುತ್ತಿರುವ ಭದ್ರತಾ ಪರಿಸ್ಥಿತಿಯನ್ನು ಭಾರತವು ಸೂಕ್ಷ್ಮವಾಗಿ ಗಮನಿಸುತ್ತಿದೆ. ನಮ್ಮ ಸಿಬ್ಬಂದಿಗಳ ಸುರಕ್ಷತೆ ಮತ್ತು ಭದ್ರತೆಯು ನಮಗೆ ಅತ್ಯಂತ ಮಹತ್ವದ್ದಾಗಿದೆ. ಕಂದಹಾರ್‌ನಲ್ಲಿರುವ ಭಾರತದ ಕಾನ್ಸುಲೇಟ್ ಜನರಲ್ ಅನ್ನು ಮುಚ್ಚಲಾಗಿಲ್ಲ. ಆದಾಗ್ಯೂ, ಕಂದಹಾರ್ ನಗರದ ಬಳಿ ನಡೆದ ತೀವ್ರ ಹೋರಾಟದಿಂದಾಗಿ, ಭಾರತ ಮೂಲದ ಸಿಬ್ಬಂದಿಯನ್ನು ಸದ್ಯಕ್ಕೆ ಭಾರತಕ್ಕೆ ಮರಳಿ ಕರೆತರಲಾಗಿದೆ. ಪರಿಸ್ಥಿತಿ ಸ್ಥಿರವಾಗುವವರೆಗೆ ಇದು ಕೇವಲ ತಾತ್ಕಾಲಿಕ ಕ್ರಮ ಎಂದು ನಾನು ಒತ್ತಿ ಹೇಳಲು ಬಯಸುತ್ತೇನೆ.  ನಮ್ಮ ಸ್ಥಳೀಯ ಸಿಬ್ಬಂದಿ ಸದಸ್ಯರ ಸಹಾಯದಿಂದ ನಮ್ಮ ರಾಯಭಾರಿ ಕಛೇರಿಯು ಕಾರ್ಯನಿರ್ವಹಿಸುತ್ತಿದೆ.

ಕಾಬೂಲ್‌ನಲ್ಲಿರುವ ನಮ್ಮ ರಾಯಭಾರಿ ಕಚೇರಿಯ ಮೂಲಕ ವೀಸಾ ಮತ್ತು ರಾಯಭಾರಿ ಸೇವೆಗಳನ್ನು ನಿರಂತರವಾಗಿ ನೀಡಲು ವ್ಯವಸ್ಥೆ ಮಾಡಲಾಗುತ್ತಿದೆ.

ಅಫ್ಘಾನಿಸ್ತಾನದ ಪ್ರಮುಖ ಪಾಲುದಾರರಾಗಿ, ಭಾರತವು ಶಾಂತಿಯುತ, ಸಾರ್ವಭೌಮ ಮತ್ತು ಪ್ರಜಾಪ್ರಭುತ್ವ ಅಫ್ಘಾನಿಸ್ತಾನಕ್ಕೆ ಬದ್ಧವಾಗಿದೆ. "

**ನವ ದೆಹಲಿ**
**ಜುಲೈ 11, 2021**

DISCLAIMER: This is an approximate translation. The original is available in English on MEA's website and may be referred to as the official press release.